## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ಕಾರ್ಯಾಲಯ, ಗುಬ್ಬಿ

**ದಿನಾಂಕಃ 29.07.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| | **ಸತ್ಯ ಪ್ರತಿಜ್ಞೆಯ ಮೇರೆಗೆ** |

### ಮುಂದುವರೆದ ಪಾಟೀ ಸವಾಲುಃ-ಪ್ರತಿವಾದಿ ಪರ ವಕೀಲರಾದ ಶ್ರೀ.ಹೆಚ್ ಜಿ ಎಸ್ ರವರಿಂದ

ಗ್ರಾಮ ಪಂಚಾಯಿತಿ ರವರು ಸ್ಥಳಕ್ಕೆ ಬಂದು ಮಾಡಿದ್ದರು ಎಂದು ಹೇಳಲಾದ ಪರಿಶೀಲನಾ ವರದಿಯನ್ನು ನೀವು ನ್ಯಾಯಾಲಯಕ್ಕೆ ಸಲ್ಲಿಸಿದ್ದಿರಾ ಎಂದರೆ ಕೊಟ್ಟಿದ್ದೇನೆ ಎಂದು ನುಡಿಯುತ್ತಾರೆ. ಯಾವುದೇ ಫಲಾನುಭವಿಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡುವ ಮೊದಲು ನೀಡುವ ಜಿ ಪಿ ಎಸ್ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದಿರಾ ಎಂದರೆ ಇಲ್ಲ ಎಂದು ನುಡಿಯುತ್ತಾರೆ. ನಿವೇಶನವನ್ನು ಹಂಚಿಕೆ ಮಾಡುವ ಅಧಿಕಾರ ಗ್ರಾಮ ಪಂಚಾಯಿತಿ ವ್ಯಾಪ್ತಿ ಇರುವುದಿಲ್ಲ ಎಂದರೆ ಸರಿಯಲ್ಲ. ಗ್ರಾಮ ಪಂಚಾಯಿತಿ ರವರು ಕೇವಲ ಫಲಾನುಭವಿಗಳ ವರದಿಯನ್ನು ಮಾತ್ರ ತಯಾರು ಮಾಡುತ್ತಾರೆ ಎಂದರೆ ಸರಿಯಲ್ಲ. ಫಲಾನುಭವಿಗಳ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದಿರಾ ಎಂದರೆ ಇಲ್ಲ ಎಂದು ನುಡಿಯುತ್ತಾರೆ. ಫಲಾನುಭವಿಗಳ ಸಂಖ್ಯೆ ಏನು ಎಂದರೆ ಕೊಟಿಲ್ಲ ಎಂದು ನುಡಿಯುತ್ತಾರೆ. ನಿಮಗೆ ಯಾವುದೇ ಹಕ್ಕು ಪತ್ರ ಕೊಟ್ಟಿಲ್ಲ ಎಂದರೆ ಸರ್. ನಿಮಗೆ ಯಾವುದೇ ಹಕ್ಕು ಪತ್ರ ನೀಡದೇ ಇದ್ದರೂ ಕೂಡ ನೀವು ಸುಳ್ಳು ದಾವೆಯನ್ನು

ದಾಖಲು ಮಾಡಿದ್ದಿರಿ ಎಂದರೆ ಸರಿಯಲ್ಲ. 2020-21 ರಲ್ಲಿ ಪ್ರತಿವಾದಿಯ ಸೊಸೆಯಾದ ಮಂಜುಳ ರವರಿಗೆ ದಾವಾ ಅನುಸೂಚಿ ಸ್ವತ್ತನ್ನು ಮಂಜೂರು ಮಾಡಲು ಜಿ ಪಿ ಎಸ್ ವರದಿ ತಯಾರಿಸಿದ್ದರು ಎಂದರೆ ಸರಿಯಲ್ಲ. ದೇವರಾಜು ಅರಸು ವಸತಿ ಯೋಜನೆಯಡಿ ದಾವಾ ಅನುಸೂಚಿ ಸ್ವತ್ತು ಪ್ರತಿವಾದಿಯ ಸೊಸೆಗೆ ಮಂಜೂರಾಗಿತ್ತು ಎಂದರೆ ಸರಿಯಲ್ಲ. ಮಹಿಳೆಯರಿಗೆ ಮಾತ್ರ ನಿವೇಶನಗಳನ್ನು ಹಂಚಿಕೆ ಮಾಡುವ ವ್ಯವಸ್ಥೆ ಗ್ರಾಮ ಪಂಚಾಯಿತಿರವರಿಗೆ ಇರುತ್ತದೆ ಎಂದರೆ ಸರಿಯಲ್ಲ. ನಿವೇಶನಗಳನ್ನು ಪಡೆಯಲು ಗ್ರಾಮ ಪಂಚಾಯಿತಿ ರವರು ನಿಗಧಿಪಡಿಸಿರುವ ಅರ್ಹತೆ ನಿಮಗೆ ಇಲ್ಲ ಎಂದರೆ ಸರಿಯಲ್ಲ. ನಿಮಗೆ ಯಾವುದೇ ಮನೆ ಇಲ್ಲ, ನಿವೇಶನ ಇಲ್ಲ ಆದ್ದರಿಂದ ನಿವೇಶನವನ್ನು ಮಂಜೂರು ಮಾಡಿ ಎಂದು ನೀವು ಗ್ರಾಮ ಪಂಚಾಯಿತಿಗೆ ಅರ್ಜಿ ನೀಡಿದ್ದಿರಾ ಎಂದರೆ ನೀಡಿದ್ದೇನೆ ಎಂದು ನುಡಿಯುತ್ತಾರೆ. ಯಾವ ದಿನಾಂಕದಂದು ಆ ರೀತಿ ಅರ್ಜಿ ನೀಡಿದ್ದೀರಿ ಎಂದು ಹೇಳಲು ಅಗುತ್ತದಾ ಎಂದರೆ ಸಾಕ್ಷಿಯು 2016 ರಲ್ಲಿ ನೀಡಿದ್ದೇನು ಎಂದು ನುಡಿಯುತ್ತಾರೆ. ಅದರ ಪ್ರತಿಯನ್ನು ಏನಾದರೂ ನೀವು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೀರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ನಿಮಗೆ ಹಾಗಲವಾಡಿಯಲ್ಲಿ ಮನೆ, ಜಮೀನು, ನಿವೇಶನ ಇದ್ದರೂ ಕೂಡ ಗಣೇಶಪುರದ ನಿವೇಶನವನ್ನು ಲಪಟಾಯಿಸುವ ಉದ್ದೇಶದಿಂದ ಸುಳ್ಳು ದಾವಾ ಸಲ್ಲಿಸಿದ್ದೀರಿ ಎಂದರೆ ಸರಿಯಲ್ಲ. ನೀವು ಹಾಗಲವಾಡಿಯ ಖಾಯಂ ನಿವಾಸಿಯಾಗಿರುವುದರಿಂದ ಬೇರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವೇಶನವನ್ನು ಪಡೆಯಲು ನಿಮಗೆ ಅರ್ಹತೆ ಇರುವುದಿಲ್ಲ ಎಂದರೆ ಸರಿಯಲ್ಲ. ನೀವು ಗ್ರಾಮ ಪಂಚಾಯಿತಿ ಅಧಿಕಾರಿಗಳ ಜೊತೆ ಶಾಮೀಲು ಆಗಿ ಡಿಮ್ಯಾಂಡ್ ರಿಜಿಸ್ಟರ್ ನಲ್ಲಿ ಮಾತ್ರ ನಿಮ್ಮ ಹೆಸರನ್ನು ನಮೂದಿಸಿಕೊಂಡಿದ್ದೀರಿ ಎಂದರೆ ಸರಿಯಲ್ಲ. ಪ್ರತಿವಾದಿಯ ತೇಜೋವದೇ ಮಾಡುವ ಉದ್ದೇಶದಿಂದ ಈ ಸುಳ್ಳು ದಾವಾ ಸಲ್ಲಿಸಿದ್ದೀರಿ ಎಂದರೆ ಸರಿಯಲ್ಲ. ನಿಮಗೂ ದಾವಾ ಅನುಸೂಚಿ ಸ್ವತ್ತಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

ಓ . ಹೇ. ಕೇ. ಸರಿ. ಇದೆ

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,
ಗುಬ್ಬಿ

Pw1 present he is cross examined by defendant counsel fully .

Defendant counsel prays time for cross of Pw2.

Call on.25.11.2024.